# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 83 |
| ಸದಸ್ಯರ ಹೆಸರು | : | ಶ್ರೀ ಅ.ದೇವೇಗೌಡ (ಪದವೀಧರರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 16.09.2021 |
| ಉತ್ತರಿಸಬೇಕಾದ ಸಚಿವರು | : | ಮುಖ್ಯಮಂತ್ರಿಯವರು |

****

| | | |
|---|---|---|
| (ಅ) | ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ನಿರ್ಮಾಣಗೊಂಡಿರುವ ಬನಶಂಕರಿ 6ನೇ ಹಂತದ 4ನೇ 'ಟಿ' ಬ್ಲಾಕ್ (ಮುಂದುವರೆದ ಬಡಾವಣೆ) ನಲ್ಲಿನ ರಸ್ತೆಗಳು ಡಾಂಬರೀಕರಣಗೊಳ್ಳದೆ ಹಾಳಾಗಿದ್ದು, ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ನಿರ್ಮಾಣಗೊಂಡಿರುವ ಬನಶಂಕರಿ 6ನೇ ಹಂತದ 4ನೇ 'ಟಿ' ಬ್ಲಾಕ್ (ಮುಂದುವರೆದ ಬಡಾವಣೆ) ಬಡಾವಣೆಯು 2003-04ರಲ್ಲಿ ರಚಿಸಲಾಗಿದ್ದು, ಆ ಸಮಯದಲ್ಲಿ ರಸ್ತೆಗಳನ್ನು ನಿರ್ಮಿಸಲಾಗಿರುತ್ತದೆ. ಪ್ರಸ್ತುತ ರಸ್ತೆಗಳು ಹಾಳಾಗಿದ್ದು, ರಸ್ತೆಗಳನ್ನು ಅಭಿವೃದ್ಧಿಪಡಿಸಲು ಅಂದಾಜು ಪಟ್ಟಿಯನ್ನು ಸಲ್ಲಿಸಿದ್ದು, ಪ್ರಾಧಿಕಾಗದಿಂದ ಸದರಿ ಅಂದಾಜು ಪಟ್ಟಿಗೆ ಅನುಮೋದನೆ ದೊರೆತ ನಂತರ ರಸ್ತೆ ಅಭಿವೃದ್ಧಿ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲಾಗುವುದು. |
| (ಆ) | ಸದರಿ ಬಡಾವಣೆಯಲ್ಲಿ ಬಹುತೇಕ ವಿದ್ಯುತ್ ತೊಂದರೆ ಉಂಟಾಗುತ್ತಿದ್ದು, ಸೂಕ್ತ ಟ್ರಾನ್ಸ್ ಫಾರಂನ್ನು ಅಳವಡಿಸುವ ಬಗ್ಗೆ ಇದುವರೆವಿಗೂ ಕ್ರಮ ಕೈಗೊಳ್ಳದಿರಲು ಕಾರಣವೇನು; | ಸದರಿ ಬಡಾವಣೆಯಲ್ಲಿ ಸಾಕಷ್ಟು ಪ್ರಮಾಣದ ವಿದ್ಯುತ್ ಪರಿವರ್ತಕಗಳನ್ನು ಪ್ರಾಧಿಕಾರದ ವತಿಯಿಂದ ಅಳವಡಿಸಲಾಗಿದ್ದು, ದುರಸ್ತಿ ಮತ್ತು ನಿರ್ವಹಣೆಯನ್ನು ಕೈಗೊಳ್ಳಲಾಗುತ್ತಿದೆ.<br><br>ವಿದ್ಯುತ್ ವ್ಯತ್ಯಯದ ಬಗ್ಗೆ ಅಗತ್ಯ ಕ್ರಮ ಕೈಗೊಳ್ಳಲು ಬೆಸ್ಕಾಂ ಇಲಾಖೆಯನ್ನು ಕೋರಲಾಗಿದೆ. |
| (ಇ) | ಸದರಿ ಬಡಾವಣೆಯಲ್ಲಿನ ಒಳಚರಂಡಿ ವ್ಯವಸ್ಥೆಯು ಸಂಪೂರ್ಣ ಹಾಳಾಗಿದ್ದು, ಇದುವರೆವಿಗೂ ದುರಸ್ಥಿಗೊಳಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಸದರಿ ಬಡಾವಣೆಯಲ್ಲಿನ ಒಳಚರಂಡಿ ವ್ಯವಸ್ಥೆಯನ್ನು ಕಲ್ಪಿಸಲು ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ರವರು ರೂ.164.00 ಕೋಟಿಗಳಿಗೆ DPR ಸಲ್ಲಿಸಿದ್ದು, ಪ್ರಾಧಿಕಾರದ ಸಭೆಯಲ್ಲಿ ಅನುಮೋದನೆ ಯಾಗಿರುತ್ತದೆ. ಅಂದಾಜು ಪಟ್ಟಿಯಂತೆ 1/3ನೇ ಭಾಗಂಶ ಹಣವನ್ನು ಬಿಡುಗಡೆ ಮಾಡಲು ಪ್ರಸ್ತಾವನೆ ಸಲ್ಲಿಸಲಾಗಿದ್ದು, ಹಣವನ್ನು ಪ್ರಾಧಿಕಾರದಿಂದ ಬಿಡುಗಡೆಗೊಳಿಸಿದ ನಂತರ ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ವತಿಯಿಂದ ಟೆಂಡರ್ ಪ್ರಕ್ರಿಯೆ ಮುಖಾಂತರ ಒಳಚರಂಡಿ ವ್ಯವಸ್ಥೆ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲಾಗುವುದು. |
| (ಈ) | ಸದರಿ ಬಡಾವಣೆಗೆ ಕಾವೇರಿ ನೀರಿನ ವ್ಯವಸ್ಥೆಯನ್ನು ಕಲ್ಪಿಸದಿರಲು ಕಾರಣವೇನು; ಯಾವಾಗ ಕಲ್ಪಿಸಲಾಗುವುದು? | ಬೆಂಗಳೂರು ಜಲಮಂಡಳಿಯಿಂದ ಬನಶಂಕರಿ 6ನೇ ಹಂತಕ್ಕೆ ನೀರು ಸರಬರಾಜು ವ್ಯವಸ್ಥೆ ಕಲ್ಪಿಸಲು ಹಾಗೂ ನೆಲಮಟ್ಟದ ಜಲಾಗಾರ ನಿರ್ಮಿಸಲು ಸವಿಸ್ತಾರವಾದ ಯೋಜನಾ ವರದಿಯೊಂದಿಗೆ ರೂ.88.20 ಕೋಟಿಗಳಿಗೆ ಅಂದಾಜು ಪಟ್ಟಿಯನ್ನು ಠೇವಣಿ ಮಾಡಲು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರಕ್ಕೆ ಸಲ್ಲಿಸಲಾಗಿದ್ದು, ಪ್ರಾಧಿಕಾರವು ಸುಮಾರು ರೂ.60 ಕೋಟಿಯನ್ನು ಜಲಮಂಡಳಿಗೆ ಪಾವತಿಸಿದ್ದು, ಪ್ರಸ್ತುತ ನೆಲಮಟ್ಟದ ಜಲಾಗಾರ ನಿರ್ಮಾಣ ಕಾಮಗಾರಿಯು ಪೂರ್ಣಗೊಂಡಿರುತ್ತದೆ ಹಾಗೂ ಶೇಕಡ 80ರಷ್ಟು ಕೊಳವೆಗಳನ್ನು ಅಳವಡಿಸುವ ಕಾಮಗಾರಿಯು ಪೂರ್ಣಗೊಂಡಿರುತ್ತದೆ.<br><br>ಮುಂದುವರೆದು, ಸದರಿ ಬಡಾವಣೆಯಲ್ಲಿ ನೀರಿನ ಕೊಳವೆಗಳನ್ನು ಅಳವಡಿಸಲು ಅರಣ್ಯ ಇಲಾಖೆಯ ಅನುಮತಿ ದೊರೆತಿರುವುದಿಲ್ಲ ಹಾಗೂ ಖಾಸಗಿ ಭೂ ಮಾಲೀಕರ ಭೂ ವಿವಾದದಿಂದಾಗಿ ಕಾಮಗಾರಿಗೆ ಅಡಚಣೆ ಉಂಟಾಗುತ್ತಿದ್ದು, ಕಾಮಗಾರಿಯು ವಿಳಂಬವಾಗಿರುತ್ತದೆ. ಆದ್ದರಿಂದ ಭೂ ವಿವಾದಗಳನ್ನು ಪರಿಹರಿಸಿಕೊಂಡು ಕೊಳವೆಗಳನ್ನು ಅಳವಡಿಸುವ ಕಾಮಗಾರಿಯನ್ನು ಪೂರ್ಣಗೊಳಿಸಿ, ಸದರಿ ಬಡಾವಣೆಗೆ ನೀರು ಸರಬರಾಜು ಮಾಡಲಾಗುವುದು. |

ಸಂಖ್ಯೆ: ನಅಇ 149 ಬೆಂಭೂಸ್ವಾ 2021

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ